## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:
1) 2016-17ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ:278
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 389 ಗ್ರಾಪಂಅ 2016 (ಭಾಗ-3), ಬೆಂಗಳೂರು, ದಿನಾಂಕ: 20-01-2017.
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1111 ಗ್ರಾಪಂಅ 2016, ಬೆಂಗಳೂರು, ದಿನಾಂಕ: 29-08-2017.
4) ಸರ್ಕಾರದಲ್ಲಿ ಸ್ವೀಕೃತಗೊಂಡಿರುವ ಮನವಿ ದಿನಾಂಕ: 03-07-2019.

******

ಮೇಲೆ ಓದಲಾದ (1)ರಲ್ಲಿ ದೊಡ್ಡ ಗ್ರಾಮ ಪಂಚಾಯತಿಗಳಲ್ಲಿ "ಹಳ್ಳಿ ಸಂತೆ" ಏರ್ಪಡಿಸಲು ವಿಲೇಜ್ ಹಾತ್ ಮಾದರಿಯಲ್ಲಿ ಮಾರುಕಟ್ಟೆಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ(ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರನ್ನು ಆಯ್ಕೆ ಮಾಡಲಾಗಿದೆ.

ಮೇಲೆ ಓದಲಾದ (3)ರಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ಕಟ್ಟಡ ಹಾಗೂ ಪ್ರಾಂಗಣವನ್ನು ನಿರ್ಮಿಸಲು ಕೆ.ಆರ್.ಐ.ಡಿ.ಎಲ್. ಸಂಸ್ಥೆಯು ಒಂದು ಮಾರುಕಟ್ಟೆಗೆ ರೂ. 31.50 ಲಕ್ಷಗಳ ಅಂದಾಜು ವೆಚ್ಚ ನೀಡಿದ್ದು, ನಂತರ ಮಾರುಕಟ್ಟೆ ಪ್ರಾಂಗಣದ ಪುನರ್ ವಿನ್ಯಾಸಗೊಳಿಸಿ ಕುಡಿಯುವ ನೀರು, ಶೌಚಾಲಯ, ತರಕಾರಿ ಸ್ವಚ್ಛಗೊಳಿಸುವ ವ್ಯವಸ್ಥೆ ಸೇರ್ಪಡೆ ಮಾಡಿ ಪುನರ್ ರಚಿತ ರೂ.33.60ಲಕ್ಷಗಳು ಅಂದಾಜು ವೆಚ್ಚ ಹಾಗೂ ವಿನ್ಯಾಸಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರಲ್ಲಿ ಈ ಕೆಳಕಂಡ ಗ್ರಾಮಗಳನ್ನು "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿತ್ತು.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು | ಆಯ್ಕೆಯಾಗಿರುವ ಗ್ರಾಮ |
|---|---|---|---|
| 01 | ದಾವಣಗೆರೆ | ಚನ್ನಗಿರಿ | ಸಂತೆಬೆನ್ನೂರು |
| 02 | ರಾಯಚೂರು | ಸಿಂಧನೂರು | ಆರ್.ಹೆಚ್.ನಂ.1ರ ವ್ಯಾಪ್ತಿಯಲ್ಲಿ ಬರುವ ಆರ್.ಹೆಚ್.ನಂ.3 ಗ್ರಾಮ ಪಂಚಾಯತಿ |

ಸದರಿ ಗ್ರಾಮಗಳಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಸೂಕ್ತ ಸ್ಥಳಾವಕಾಶ ಲಭ್ಯವಿಲ್ಲದಿರುವುದರಿಂದ ಮಾರುಕಟ್ಟೆ ನಿರ್ಮಾಣ ಮಾಡಲು ಸ್ಥಳಾವಕಾಶ ಲಭ್ಯವಿರುವ ಈ ಕೆಳಕಂಡ ಗ್ರಾಮಗಳನ್ನು ಆಯ್ಕೆ ಮಾಡಲು ಹಾಗೂ ಹಾವೇರಿ ಜಿಲ್ಲೆಯ ಹಾವೇರಿ ತಾಲ್ಲೂಕಿನ ಕಬ್ಬೂರ ಗ್ರಾಮವನ್ನು "ಹಳ್ಳಿ ಸಂತೆ"

ಯೋಜನೆಯಡಿ ಮಾರುಕಟ್ಟೆಯನ್ನು ನಿರ್ಮಿಸಲು ಹೊಸದಾಗಿ ಸೇರ್ಪಡೆಗೊಳಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು | ಆಯ್ಕೆಯಾಗಿರುವ ಗ್ರಾಮ | ಬದಲಾವಣೆಯಾಗಿರುವ ಗ್ರಾಮ |
|---|---|---|---|---|
| 01 | ದಾವಣಗೆರೆ | ಚನ್ನಗಿರಿ | ಸಂತೆಬೆನ್ನೂರು | ಕರೇಕಟ್ಟೆ |
| 02 | ರಾಯಚೂರು | ಸಿಂಧನೂರು | ಆರ್.ಹೆಚ್.ಸಂ.1ರ ವ್ಯಾಪ್ತಿಯಲ್ಲಿ ಬರುವ ಆರ್.ಹೆಚ್.ಸಂ.3 ಗ್ರಾಮ ಪಂಚಾಯತಿ | ಶಾಂತಿನಗರ |

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ಗ್ರಾಪಂಅ 2018, ಬೆಂಗಳೂರು, ದಿನಾಂಕ: 24-01-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಗ್ರಾಮಗಳಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಮಂಜೂರಾತಿ ನೀಡಿದೆ.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು | ಆಯ್ಕೆಯಾಗಿರುವ ಗ್ರಾಮ |
|---|---|---|---|
| 01 | ದಾವಣಗೆರೆ | ಚನ್ನಗಿರಿ | ಕರೇಕಟ್ಟೆ |
| 02 | ರಾಯಚೂರು | ಸಿಂಧನೂರು | ಶಾಂತಿನಗರ |
| 03 | ಹಾವೇರಿ | ಹಾವೇರಿ | ಕಬ್ಬೂರ |

ಸದರಿ ಯೋಜನೆಯ ಬಗ್ಗೆ ದಿನಾಂಕ 06-07-2016ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಹಾಗೂ ಹೊಸದಾಗಿ ಸೇರ್ಪಡೆಗೊಳಿಸಿದ ಕ್ರಮ ಸಂಖ್ಯೆ:03ರಲ್ಲಿನ ಗ್ರಾಮದಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ನಿರ್ಮಾಣ ಮಾಡಲು ಈಗಾಗಲೇ ಸರ್ಕಾರದಿಂದ ಬಿಡುಗಡೆಗೊಳಿಸಲಾದ ಅನುದಾನದ ಮೂಲಕ ಅನುಷ್ಠಾನಗೊಳಿಸಲು ಅನುಷ್ಠಾನ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ (ಕೆ.ಆರ್.ಐ.ಡಿ.ಎಲ್.), ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 24/01/2020.
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಆ್ಯಂಡ್ ಎಸ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಪಿ.ಬಿ.ನಂ:5398, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಇ ಆ್ಯಂಡ್ ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಪಿ.ಬಿ.ನಂ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಆ್ಯಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಪಿ.ಬಿ.ನಂ:5329.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ (ಕೆ.ಆರ್.ಐ.ಡಿ.ಎಲ್.), ಬೆಂಗಳೂರು.
6. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ದಾವಣಗೆರೆ, ಹಾವೇರಿ ಹಾಗೂ ರಾಯಚೂರು ಜಿಲ್ಲಾ ಪಂಚಾಯತಿಗಳು.
8. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
9. ನಿರ್ದೇಶಕರು (ಗ್ರಾ.ಮೂ.ಸೌ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10. ಅಧೀನ ಕಾರ್ಯದರ್ಶಿ (ಪ್ರ), ಆರ್ಥಿಕ ಇಲಾಖೆ, ವೆಚ್ಚ-5, ವಿಧಾನ ಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
12. ನಿರ್ದೇಶಕರು (ಯೋ.ಉ.ಮಾ.), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
13. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಳಿಯಾಳ, ಮೂಡಿಗೆರೆ, ರಾಣೆಬೆನ್ನೂರು, ಹಾವೇರಿ ಹಾಗೂ ಅರಕಲಗೂಡು.
14. ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
15. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
16. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
2. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.